ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

3

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 19/10/20

# ಸಚಿವ ಸುರೇಶ್‌ಕುಮಾರ್ ಡಿಸ್ಚಾರ್ಜ್

19/10/20

**ಬೆಂಗಳೂರು:** ಕೊರೊನಾ ಸೋಂಕಿನ ಹಿನ್ನೆಲೆಯಲ್ಲಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದ ಶಿಕ್ಷಣ ಸಚಿವ ಎಸ್.ಸುರೇಶ್‌ಕುಮಾರ್ ಅವರು ಗುಣ ಮುಖರಾಗಿ ಮನೆ ಸೇರಿದ್ದಾರೆ.



ಈ ಕುರಿತು ಫೇಸ್ ಬುಕ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು ಅ.17ರ (ಶನಿವಾರ) ರಾತ್ರಿಯೇ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದೇನೆ ಎಂದು ತಿಳಿಸಿದ್ದಾರೆ. ಇನ್ನೂ ಎರಡು ವಾರಗಳ ಕಾಲ ಮನೆಯಿಂದ ಹೊರಗಡೆ ಹೋಗಬಾರದು ಎಂಬ ಷರತ್ತಿನ ಮೇಲೆ ವೈದ್ಯರು ಆಸ್ಪತ್ರೆಯಿಂದ ಬಿಡುಗಡೆ ಮಾಡಿದ್ದಾರೆ. ಆ ಹಿನ್ನೆಲೆಯಲ್ಲಿ ನಾನು ವೈದ್ಯರು ನೀಡಿರುವ ಸಲಹೆಯನ್ನು ಪಾಲಿಸುತ್ತೇನೆ. ಜತೆಗೆ ಮನೆಯಲ್ಲಿಯೇ ಚಿಕಿತ್ಸೆ ಮುಂದುವರಿಯಲಿದೆ ಎಂದು ಹೇಳಿದ್ದಾರೆ.